## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 733 |
| 2 | ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ವಿಷಯ | ರೇಷ್ಮೆ ಮಾರುಕಟ್ಟೆ ಅಭಿವೃದ್ಧಿಪಡಿಸುವ ಕುರಿತು. |
| 4 | ಉತ್ತರಿಸಬೇಕಾದ ದಿನಾಂಕ | 12.03.2025 |
| 5 | ಉತ್ತರಿಸುವವರು | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |
| | **ಪ್ರಶ್ನೆಗಳು** | **ಉತ್ತರಗಳು** |
| ಅ) | ಏಷ್ಯಾದಲ್ಲಿಯೇ ಅತಿ ಹೆಚ್ಚು ರೇಷ್ಮೆಗೂಡು ಮಾರಾಟ ವಹಿವಾಟು ನಡೆಸುವ ರಾಮನಗರ ಮತ್ತು ಶಿಡ್ಲಘಟ್ಟದಲ್ಲಿರುವ ರೇಷ್ಮೆ ಮಾರುಕಟ್ಟೆಗಳನ್ನು ಹೈ-ಟೆಕ್ ಮಾರುಕಟ್ಟೆಗಳನ್ನಾಗಿ ಅಭಿವೃದ್ಧಿಪಡಿಸಲು ರೂ.250 ಕೋಟಿ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿರುವುದು ನಿಜವೇ; | ಹೌದು, ರಾಮನಗರ ಮತ್ತು ಶಿಡ್ಲಘಟ್ಟದಲ್ಲಿರುವ ರೇಷ್ಮೆ ಮಾರುಕಟ್ಟೆಗಳನ್ನು ಹೈ-ಟೆಕ್ ಮಾರುಕಟ್ಟೆ ಅಭಿವೃದ್ಧಿಪಡಿಸಲು ಒಟ್ಟಾರೆ ರೂ. 400.00 ಕೋಟಿಗಳ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. |
| ಆ) | ಹೌದಾದಲ್ಲಿ, ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು; ಈ ಕಾಮಗಾರಿಗಳ ಪ್ರಸುತ್ತ ಹಂತವೇನು; | **1).** ರಾಮನಗರ ಜಿಲ್ಲೆ ಚನ್ನಪಟ್ಟಣ ಸರ್ಕಾರಿ ರೇಷ್ಮೆ ತರಬೇತಿ ಸಂಸ್ಥೆ ಆವರಣದಲ್ಲಿ ರಾಮನಗರ-ಚನ್ನಪಟ್ಟಣ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆ ನಿರ್ಮಾಣ;<br>**ಹಂತ-1 ರ ಕಾಮಗಾರಿ**<br>ಕಾಮಗಾರಿಯು ಪ್ರಗತಿಯಲ್ಲಿದ್ದು, ಪ್ರಸ್ತುತ ಶೇ.65 ಕಾಮಗಾರಿ ಪೂರ್ಣಗೊಂಡಿರುತ್ತದೆ.<br>ಅಂದಾಜು ಮೊತ್ತ : 75.00 ಕೋಟಿಗಳು.<br>ಲೆಕ್ಕಶೀರ್ಷಿಕೆ:4851-00-107-1-01(436) ನಬಾರ್ಡ್ |
| ಇ) | ಈ ಕಾಮಗಾರಿಗಳ ಅನುಷ್ಠಾನಗೊಳಿಸಲು ಟೆಂಡರ್ ಕರೆಯಲಾಗಿದೆಯೇ; ಹಾಗೂ ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ; (ಗುತ್ತಿಗೆದಾರರ ಮತ್ತು ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು) | ಗುತ್ತಿಗೆದಾರರ ಹೆಸರು : Sri. Nitin P.N<br>(M/s N.S.L Construction Private Limited)<br>**ಹಂತ-2 ರ ಕಾಮಗಾರಿ**<br>ಅಂದಾಜು ಮೊತ್ತ : 125.00 ಕೋಟಿಗಳು.<br>ಲೆಕ್ಕಶೀರ್ಷಿಕೆ : 4851-00-107-1-01 (436) ನಬಾರ್ಡ್<br>ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಲೋಕೋಪಯೋಗಿ ಇಲಾಖೆಯ ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರ (PRAMC) ಬೆಂಗಳೂರು ರವರಿಗೆ ಹಸ್ತಾಂತರಿಸಲಾಗಿದ್ದು, PRAMC ರವರಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.<br>**2)** ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕು ಹೈ-ಟೆಕ್ ಸರ್ಕಾರಿ ರೇಷ್ಮೆ ಗೂಡಿನ ಮಾರುಕಟ್ಟೆ ನಿರ್ಮಾಣ ಕಾಮಗಾರಿ.<br>**ಹಂತ-1 ಮತ್ತು ಹಂತ-2 ರ ಕಾಮಗಾರಿ**<br>ಅಂದಾಜು ಮೊತ್ತ : 200.00 ಕೋಟಿಗಳು<br>ಲೆಕ್ಕಶೀರ್ಷಿಕೆ: 4851-00-107-1-01(436)<br>ನಬಾರ್ಡ್ (ರೂ.75.00 ಕೋಟಿಗಳು) ಮತ್ತು<br>ನಬಾರ್ಡ್‌ಯೇತರ (ರೂ.125.00 ಕೋಟಿಗಳು)<br>ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಲೋಕೋಪಯೋಗಿ ಇಲಾಖೆಯ ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರ (PRAMC) ಬೆಂಗಳೂರು ರವರಿಗೆ ಹಸ್ತಾಂತರಿಸಲಾಗಿದ್ದು, PRAMC ರವರಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. |

ಸಂಖ್ಯೆ: ರೇಷ್ಮೆ 33 ರೇಕೃವಿ 2025

(ಕೆ. ವೆಂಕಟೇಶ್)
ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು